**ದಿನಾಂಕಃ 11–12–2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ ಅದರಲ್ಲಿ ಬರೆದಿರುವ ವಿಷಯಗಳು ನಾನೇ ಹೇಳಿ ಬರೆಸಿದ್ದೇನೆ. ಸದರಿ ಸಂಗತಿಗಳು ಸತ್ಯದಿಂದ ಕೂಡಿರುತ್ತವೆ.

**ಮುಖ್ಯ ವಿಚಾರಣೆ ಅರ್ಜಿದಾರರ ಪರ ಶ್ರೀ ಸಿ ಬಿ ಕೆ ವಕೀಲರಿಂದಃ**

ಅಪಘಾತಕ್ಕೆ ಸಂಬಂಧಿಸಿದ ಪ್ರ.ವ.ವರದಿಯ ದೃಡೀಕೃತ ನಕಲನ್ನು ಕೊಟ್ಟಿದ್ದು ಅದನ್ನು ನಿ ಪಿ –1 ಎಂದು, ಪಿರ್ಯಾದಿಯ ದೃಡೀಕೃತ ನಕಲನ್ನು ಕೊಟ್ಟಿದ್ದು ಅದನ್ನು ನಿ ಪಿ –2 ಎಂದು, ಸ್ಥಳ ಪಂಚನಾಮೆಯ ದೃಡೀಕೃತ ನಕಲನ್ನು ಕೊಟ್ಟಿದ್ದು ಅದನ್ನು ನಿ ಪಿ –3 ಎಂದು, ವಾಹನದ ಜಪ್ತಿ ಪಂಚನಾಮೆ ದೃಡೀಕೃತ ನಕಲನ್ನು ಕೊಟ್ಟಿದ್ದು ಅದನ್ನು ನಿ ಪಿ –4 ಎಂದು, ಐಎಂವಿ ವರದಿಯ ದೃಡೀಕೃತ ನಕಲನ್ನು ಕೊಟ್ಟಿದ್ದು ಅದನ್ನು ನಿ ಪಿ –5 ಎಂದು, ಗಾಯದ ಪ್ರಮಾಣ ಪತ್ರವನ್ನು ಕೊಟ್ಟಿದ್ದು ಅದನ್ನು ನಿ ಪಿ –6 ಎಂದು, ದೋಷಾರೋಪಣೆ ಪಟ್ಟಿಯ ದೃಡೀಕೃತ ನಕಲನ್ನು ಕೊಟ್ಟಿದ್ದು ಅದನ್ನು ನಿ ಪಿ –7 ಎಂದು ಗುರುತಿಸಲಾಯಿತು.

ಅರ್ಜಿದಾರರ ಮೂಲ ಆದಾರ ಕಾರ್ಡ, ಪ್ಯಾನ್ ಕಾರ್ಡ, ಬ್ಯಾಂಕ್ ಪಾಸ್ ಬುಕ್ ಮೂಲ ದಾಖಲೆಗಳ ಜೊತೆ ಅವುಗಳ ನೋಟರಿ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಮೂಲ ದಾಖಲೆಗಳ ಜೊತೆ ಪರಿಶೀಲಿಸಿದ ನಂತರ ಸದರಿ ದಾಖಲೆಗಳು ದಿನ ಬಳಕೆಗೆ ಬೇಕಾಗಿರುವುದರಿಂದ ಅವುಗಳ ನೋಟರಿ ಪ್ರತಿಗಳನ್ನು ನಿ ಪಿ–8 ರಿಂದ ನಿ ಪಿ– 10 ಎಂದು ಗುರುತಿಸಲಾಯಿತು. ಅರ್ಜಿದಾರರ ಮೂಲ ಆದಾರ ಕಾರ್ಡ, ಪ್ಯಾನ್ ಕಾರ್ಡ, ಬ್ಯಾಂಕ್ ಪಾಸ್ ಬುಕ್ ಗಳನ್ನು ಅರ್ಜಿದಾರರಿಗೆ ಹಿಂದುರಿಗಿಸಲಾಯಿತು.

ಅರ್ಜಿಯಲ್ಲಿ ಕೇಳಿದಂತೆ ಅರ್ಜಿಯನ್ನು ಪುರಸ್ಕರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲುಃ 2 ನೇ ಎದುರುದಾರರ ಪರ ಶ್ರೀ ಪಿ ಕೆ ಎಸ್ ವಕೀಲರಿಂದಃ**

ಅಪಘಾತವು ಶಿಕಾರಿಪುರದ ಹೆಲಿಪ್ಯಾಡ್ ಹತ್ತಿರ ದಿನಾಂಕ 12.05.2024 ರಂದು ಆಗಿರುತ್ತದೆ. ಅಪಘಾತವಾದ ತಕ್ಷಣ ನನ್ನನ್ನು ಶಿಕಾರಿಪುರದ ಸರ್ಕಾರಿ ಆಸ್ಪತ್ರೆಗೆ ಹೋಗಿರುತ್ತಾರೆ. ಆನಂತರ ಶಿವಮೊಗ್ಗದ ಮ್ಯಾಕ್ಸ ಆಸ್ಪತ್ರೆಗೆ ಹೋಗಿರುತ್ತೇನೆ. ಮ್ಯಾಕ್ಸ ಆಸ್ಪತ್ರೆಯಲ್ಲಿ 3 ಬಾರಿ ದಾಖಲಾಗಿದ್ದೇನು. ಅಪಘಾತದಲ್ಲಿ ನನಗೆ ಎದೆಗೆ ನೋವಾಗಿತ್ತು ಎರಡು ಹಲ್ಲುಗಳು ಕಿತ್ತಿದ್ದವು. ಆ ಕುರಿತಂತೆ ಚಿಕಿತ್ಸೆ ಪಡೆದಿರುತ್ತೇನೆ. ನಾನು ಒಳರೋಗಿಯಾಗಿ ಚಿಕಿತ್ಸೆ ಪಡೆದಿರುತ್ತೇನೆ. ಆ ಕುರಿತಂತೆ ದಾಖಲೆ ಹಾಜರು ಮಾಡಿಲ್ಲ ಎಂದರೆ ಸರಿ. ಆದರೆ ಚಿಕಿತ್ಸೆ ಪಡೆದುಕೊಂಡಿರುತ್ತೇನೆ ಎಂದು ನುಡಿಯುತ್ತಾರೆ. ನಾನು ಸುಳ್ಳು ಪ್ರಮಾಣ ಪತ್ರ ಹಾಗೂ ದಾಖಲೆಗಳನ್ನು ಹಾಜರುಪಡಿಸಿ ಸುಳ್ಳು

ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಸಹಿ/–

(ಶ್ರೀಮತಿ ಹುಲ್ಲೂರ ಹೇಮಲತಾ ಬಸಪ್ಪ)

ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,

ರಾಣೇಬೆನ್ನೂರು.